ನೇರ ಫೋನ್ ಇನ್ ಕಾರ್ಯಕ್ರಮ ಏರ್ಪಡಿಸಿರುವುದರಿಂದ ವಿದ್ಯಾರ್ಥಿಗಳು ವಿವಿಧ ವಿಷಯಗಳಲ್ಲಿ ಇರುವ ಸಂಶಯಗಳನ್ನು ನಿವಾರಣೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಸಿ.ಇ.ಟಿ. ಬೋಧನೆಯಲ್ಲಿ ಉಪಯೋಗಿಸುವ ಮಾಹಿತಿಯನ್ನು ಕೆಇಎ/ವೆಬ್‌ಸೈಟ್‌ನಲ್ಲಿ ಹಾಕಿಸಲಾಗುವುದು. ಇದರಿಂದ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಪ್ರಾಧ್ಯಾಪಕರಿಂದ ಸಿದ್ಧಪಡಿಸಿರುವ Reference Material ದೊರಕುತ್ತದೆ.

ವಿದ್ಯಾರ್ಥಿಗಳು ಇ-ಮೇಲ್ ಮೂಲಕ ಸಹ ಪ್ರಶ್ನೆಗಳನ್ನು ಕೇಳಲು ಅವಕಾಶ ಕಲ್ಪಿಸಲಾಗಿದೆ. ಈ ಕ್ರಮ ತೆಗೆದುಕೊಂಡಿರುವುದರಿಂದ ವಿದ್ಯಾರ್ಥಿಗಳು ಉತ್ತಮವಾಗಿ ಸಿದ್ದಗೊಳ್ಳುತ್ತಾರೆ ಹಾಗೂ ಇವರು ವೃತ್ತಿಪರ ಪ್ರವೇಶಕ್ಕೆ ವಂಚಿತರಾಗುವುದಿಲ್ಲ.

ಇ) ಈ ಬಗ್ಗೆ ಪರಿಶೀಲಿಸಲಾಗುವುದು.

ಬಿ.ಟಿ.ಎಂ. ಮತಕ್ಷೇತ್ರಕ್ಕೆ ಪದವಿ ಕಾಲೇಜುಗಳ ಮಂಜೂರಾತಿ

866 (243) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಿಟಿಎಂ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರಿ ಪದವಿ ಕಾಲೇಜುಗಳೆಷ್ಟು;

ಆ) 2010-11ನೇ ಸಾಲಿನಲ್ಲಿ ಬೆಂಗಳೂರಿನಲ್ಲಿ ಹೊಸದಾಗಿ ಎಲ್ಲೆಲ್ಲಿ ಸರ್ಕಾರಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ;

ಇ) 2011-12ನೇ ಸಾಲಿನಲ್ಲಿ ಬಿಟಿಎಂ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆಯೇ?

ಡಾ. ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು):

ಅ) ಸರ್ಕಾರಿ ಪದವಿ ಕಾಲೇಜುಗಳು ಇರುವುದಿಲ್ಲ.

ಆ) 2010-11ನೇ ಸಾಲಿನಲ್ಲಿ ಬೆಂಗಳೂರಿನಲ್ಲಿ ಹೊಸದಾಗಿ ಯಾವುದೇ ಸರ್ಕಾರಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಿರುವುದಿಲ್ಲ.

ಇ) ಇಲ್ಲ.

ವಿಶ್ವೇಶ್ವರ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ನಡೆದಿರುವ ಅವ್ಯವಹಾರ

867 (244) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ 800 ಇಂಜಿನೀಯರಿಂಗ್ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳಲ್ಲಿ ಅವ್ಯವಹಾರ ನಡೆದಿದೆ ಎನ್ನಲಾದ ದೂರು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ. ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಈ ಬಗ್ಗೆ ವಾಸ್ತವಾಂಶವನ್ನು ಪರಿಶೀಲಿಸಲು ಸರ್ಕಾರವು ಆದೇಶ ಸಂ. ಇಡಿ 09 ಯುಟಿವಿ 2011, ದಿನಾಂಕ: 28-01-2011 ರಂದು ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿದ್ದು, ದಿನಾಂಕ: 11-02-2011 ರಂದು ಈ ಸಂಬಂಧ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿದೆ.

ಕಾರ್ಯಕಾರಿ ಸಮಿತಿಯ ಉತ್ತರವನ್ನು ನಿರೀಕ್ಷಿಸಲಾಗುತ್ತಿದೆ.

ರಾಜ್ಯದಲ್ಲಿ 1987 ರಿಂದ 1995 ರ ಅವಧಿಯಲ್ಲಿ ಆರಂಭವಾಗಿರುವ ಶಾಲೆಗಳಿಗೆ ಅನುದಾನ

868 (713) ಶ್ರೀ ರಾಮಲಿಂಗಾ ರೆಡ್ಡಿ (ಬಿಟಿಎಂ ಲೇಔಟ್): ಮಾನ್ಯ ಪ್ರಾಥಮಿಕ ಮತ್ತು ಪೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ 1987ರಿಂದ 1995ರ ಅವಧಿಯಲ್ಲಿ ಆರಂಭಗೊಂಡಿರುವ ಶಾಲೆಗಳ ಸಂಖ್ಯೆ ಎಷ್ಟು;

ಆ) ಈ ಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ನಿರ್ಧರಿಸಿದೆಯೇ;

ಇ) ಹಾಗಿದ್ದಲ್ಲಿ, ಈ ಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ;

ಈ) ಹಾಗಿಲ್ಲದಿದ್ದಲ್ಲಿ, ಕಾರಣಗಳೇನು;

ಉ) ಇವುಗಳಿಗೆ ಅನುದಾನ ನೀಡಲು ಬೇಕಾಗಿರುವ ಹಣವೆಷ್ಟು;

ಊ) ಈ ಶಾಲೆಗಳಿಗೆ 2010-11 ಆರ್ಥಿಕ ವರ್ಷದೊಳಗೆ ಅನುದಾನಿತ ಬಿಡುಗಡೆ ಮಾಡಲಾಗುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಆ) ಈಗಿನ cut-off ವರ್ಷದ (1994-95) ಅನುಗುಣವಾಗಿ ಶಾಲೆಗಳು ಸಹಾಯಾನುದಾನಕ್ಕೆ ಒಳಪಡಿಸಲು ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಈ ಕೆಳಕಂಡಂತಿವೆ:-

ಪ್ರಾಥಮಿಕ ಶಾಲೆಗಳು	–	521
ಪ್ರೌಢಶಾಲೆಗಳು	–	440
ಒಟ್ಟು	–	961

ಆ) ದಿನಾಂಕ: 01-06-1987 ರಿಂದ 1994-95ನೇ ಶೈಕ್ಷಣಿಕ ಸಾಲಿನ ಅವಧಿಯಲ್ಲಿ ಪ್ರಾರಂಭಿಸಿ ಯಾವುದೇ ವಿಚ್ಛಿನ್ನತೆ ಇಲ್ಲದೇ ಸತತವಾಗಿ ನಡೆಸಲಾಗುತ್ತಿರುವ ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಆಸ್ಪದ ಕಲ್ಪಿಸಲಾಗಿದೆ.

ಇ) 373 ಪ್ರಾಥಮಿಕ ಶಾಲೆಗಳು ಮತ್ತು 384 ಪ್ರೌಢಶಾಲೆಗಳು ಸಹಾಯಾನುದಾನಕ್ಕೆ ಒಳಪಟ್ಟಿರುತ್ತವೆ.

ಈ) ಆರ್ಥಿಕ ಇಲಾಖೆಯು ಸುತ್ತೋಲೆ ಸಂಖ್ಯೆ: ಆಇ 01 ಬಿಇಎಂ 2008, ದಿನಾಂಕ: 21-10-2009ರಲ್ಲಿ ಇತರೆ ಅಂಶಗಳ ಜೊತೆಗೆ "ಸಹಾಯಾನುದಾನಕ್ಕೆ ಒಳಪಡಿಸುವ ಯಾವುದೇ ಹೊಸ ಪ್ರಕರಣಗಳನ್ನು ಪರಿಗಣಿಸತಕ್ಕದ್ದಲ್ಲ" ಎಂಬ ಮಿತವ್ಯಯ ಕ್ರಮಗಳನ್ನು ಪಾಲಿಸುವಂತೆ